# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 924

ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 17.12.2024

ಉತ್ತರಿಸುವವರು : ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಹಟ್ಟಿ ಚಿನ್ನದ ಗಣಿ ಕಂಪನಿಯ ವಿವಿಧ ವಿಭಾಗಗಳಲ್ಲಿ ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದ ಹಾಗೂ ಉಳಿಕೆ ಮೂಲ / ಸ್ಥಳೀಯೇತರ ವೃಂದದಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸಂಖ್ಯೆ: ಹಚಿಗ / ಮಾಸ / ಇಎಸ್‌ಟಿ / ನೇನೇಪ್ರ / 10 / 2023-24, ದಿನಾಂಕ 15.03.2024ರ ಪ್ರಕಟಣೆ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು, ಸದರಿ ನೇಮಕಾತಿಗೆ ಪ್ರಕ್ರಿಯೆಯು ಪ್ರಸ್ತುತ ಯಾವ ಹಂತದಲ್ಲಿದೆ; | ಹಟ್ಟಿ ಚಿನ್ನದ ಗಣಿ ಕಂಪನಿಯ ಸಿಬ್ಬಂದಿ ಮತ್ತು ಕಾರ್ಮಿಕರ ವೃಂದ ಮತ್ತು ನೇಮಕಾತಿಯ ಸಮಗ್ರ ಪರಿಷ್ಕರಣೆಯ ಸಲುವಾಗಿ ಕಾಲಾವಕಾಶ ಬೇಕಾಗಿರುವುದರಿಂದ, ಸರ್ಕಾರದ ಆದೇಶ ಸಂ: ಸಿಐ 67 ಸಿಎಂಸಿ 2022 ದಿನಾಂಕ 10.10.2023 ರಂದು ಹಟ್ಟಿ ಚಿನ್ನದ ಗಣಿ ಸಂಸ್ಥೆಯ G5 ಮತ್ತು G8 ದರ್ಜೆಯಲ್ಲಿನ ಒಟ್ಟು 157 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕಾರ್ಯಕಾರಿ ಆದೇಶ ಹೊರಡಿಸಲಾಗಿರುತ್ತದೆ.<br>ವ್ಯವಸ್ಥಾಪಕ ನಿರ್ದೇಶಕರು, ಹಟ್ಟಿ ಚಿನ್ನದ ಗಣಿ ಕಂಪನಿ ನಿ. ಇವರು ದಿನಾಂಕ 17.02.2024ರ ಪತ್ರದಲ್ಲಿ ಸರ್ಕಾರದ ಕಾರ್ಯಕಾರಿ ಆದೇಶ ದಿನಾಂಕ 10.10.2023ರಲ್ಲಿ ಕೆಲವು ಹುದ್ದೆಗಳಿಗೆ ಕನಿಷ್ಠ ವಿದ್ಯಾರ್ಹತೆಯಲ್ಲಿ ಹಾಗೂ ಆಯ್ಕೆ ವಿಧಾನವನ್ನು ಪರಿಷ್ಕರಿಸಿ ಆದೇಶ ಹೊರಡಿಸುವಂತೆ ಕೋರಿದ್ದು, ಹಾಗೂ ದಿನಾಂಕ 24.01.2024 ರಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ನೇರ ನೇಮಕಾತಿ ಮುಖಾಂತರ ಹುದ್ದೆಗಳನ್ನು ಭರ್ತಿ ಮಾಡುವ ಕೆಲವು ವಿಭಾಗದಲ್ಲಿ ಮಹಿಳೆ ಮತ್ತು ಅಂಗವಿಕಲ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ವಿನಾಯಿತಿ ನೀಡುವಂತೆ ಕೋರಿರುತ್ತಾರೆ.<br>ಅದರಂತೆ, ಈ ಎರಡೂ ಪ್ರಸ್ತಾವನೆಗಳ ಕುರಿತು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಪಡೆಯಲಾಗಿರುತ್ತದೆ. ಪ್ರಸ್ತುತ ಹಟ್ಟಿ ಚಿನ್ನದ ಗಣಿ ಕಂಪನಿಯಲ್ಲಿ ನೇರ ನೇಮಕಾತಿ ಮುಖಾಂತರ ಹುದ್ದೆಗಳನ್ನು ಭರ್ತಿ ಮಾಡುವ ಕೆಲವು ವಿಭಾಗದಲ್ಲಿ ಮಹಿಳೆ ಮತ್ತು ಅಂಗವಿಕಲ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ವಿನಾಯಿತಿ ಕುರಿತಂತೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಇವರ ಅಭಿಪ್ರಾಯ ಸಹ ಕೋರಲಾಗಿದೆ. ಪ್ರಸ್ತುತ ಸದರಿ ಇಲಾಖೆಯ ಅಭಿಪ್ರಾಯ ನಿರೀಕ್ಷಣೆಯಲ್ಲಿದೆ. ಸದರಿ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತಗೊಂಡ ನಂತರ ಮುಂದಿನ ಅಗತ್ಯ ಕ್ರಮ ವಹಿಸಲಾಗುವುದು. |
| ಆ) | ಸದರಿ ನೇಮಕಾತಿಗೆ ಸಂಬಂಧಿಸಿದಂತೆ ಇದುವರೆಗೆ ಯಾವುದೇ ಪ್ರಕ್ರಿಯೆ ನಡೆಯದೇ ಇರಲು ಕಾರಣಗಳೇನು; ಹಾಗೂ ಯಾವ ಕಾಲಮಿತಿಯೊಳಗೆ ಈ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದು? | |

ಸಂಖ್ಯೆ: ಸಿಐ 113 ಸಿಎಂಸಿ 2024

(ಎಸ್.ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು